ಅವಶ್ಯವಿರುವ ಕೃಷಿ ಯಂತ್ರೋಪಕರಣಗಳನ್ನು ಪಟ್ಟಿ ಮಾಡಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸುವ ಅನುಷ್ಠಾನ ಮತ್ತು ಉಸ್ತುವಾರಿ ಸಮಿತಿಯ ಅನುಮೋದನೆ ಪಡೆದು, ಕೇಂದ್ರದಲ್ಲಿ ಕೃಷಿ ಉಂತ್ರೋಪಕರಣಗಳನ್ನು ದಾಸ್ತಾನು ಮಾಡಲಾಗುತ್ತಿದೆ.

- ರೈತರಿಗೆ ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಕಡಿಮೆ ಬಾಡಿಗೆ ದರಗಳನ್ನು ನಿಗಧಿಪಡಿಸಿ ಕೃಷಿ ಯಂತ್ರೋಪಕರಣಗಳ ಸೇವೆಯನ್ನು ಒದಗಿಸಲಾಗುತ್ತಿದೆ.

ಊ) 2014–15ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳ 183 ಹೋಬಳಿಗಳಲ್ಲಿ ಕೃಷಿ ಯಂತ್ರೋಪಕರಣಗಳ ಬಾಡಿಗೆ ಆಧಾರಿತ ಸೇವಾ ಕೇಂದ್ರಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗಿದೆ.

2015–16ನೇ ಸಾಲಿನಲ್ಲಿ 557 ಹೋಬಳಿಗಳಲ್ಲಿ ಕೃಷಿ ಯಂತ್ರೋಪಕರಣಗಳ ಬಾಡಿಗೆ ಆಧಾರಿತ ಸೇವಾ ಕೇಂದ್ರಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿರುತ್ತದೆ.

ಋ) ಕೃಷಿ ಭಾಗ್ಯ ಯೋಜನೆಯ ಕುರಿತು ಮಾಹಿತಿ ಪಡೆಯಲು ಕೃಷಿ ಹಾಗೂ ಕೃಷಿ ಸಂಬಂಧಿತ ಇಲಾಖೆಗಳಲ್ಲಿನ ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಹೋಬಳಿ ಮಟ್ಟದ ರೈತ ಸಂಪರ್ಕ ಕೇಂದ್ರಗಳ ಕೃಷಿ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿರುತ್ತದೆ.

ಕೃಷಿ ಇಲಾಖೆಯಿಂದ ನೀಡುತ್ತಿರುವ ವಿಶೇಷ ಅನುದಾನ

666(1294); ಡಾ॥ ಸುಧಾಕರ್ ಕೆ. (ಚಿಕ್ಕಬಳ್ಳಾಪುರ)

ಅ) ಚಿಕ್ಕಬಳ್ಳಾಪುರ ಕೃಷಿ ಪ್ರಧಾನ ಹಾಗೂ ಹೊಸದಾಗಿ ನಿರ್ಮಾಣಗೊಂಡಿರುವ ಜಿಲ್ಲೆಯಾಗಿದ್ದು, ಇದರ ಕೃಷಿ ಪ್ರಗತಿಗೆ ಇಲಾಖೆಯಿಂದ ವಿಶೇಷ ಅನುದಾನ ಏನಾದರೂ ನೀಡಲಾಗುತ್ತಿದೆಯೇ; ನೀಡುತ್ತಿದ್ದರೆ ವಿವರ ನೀಡುವುದು;

ಆ) ಚಿಕ್ಕಬಳ್ಳಾಪುರ ಜಿಲ್ಲೆ ಬರಪೀಡಿತ ಜಿಲ್ಲೆ ಎನಿಸಿಕೊಂಡಿದ್ದರೂ, ಹೆಣ್ಣು, ತರಕಾರಿ ಹಾಗೂ ಹೂವಿನ ಬೆಳೆಯಲ್ಲಿ ಸಾಕಷ್ಟು ಪ್ರಗತಿ ಹೊಂದಿದ್ದು, ಈ ಬೆಳೆಗಳ ಇಳುವರಿ ಹೆಚ್ಚಿಸುವ ರೈತರನ್ನು ಪ್ರೋತ್ಸಾಹಿಸುವ ಯಾವ ವಿಧದ ಯೋಜನೆ ಇಲಾಖೆಯಿಂದ ಲಭ್ಯವಿದೆ; ಅದರ ಅನುಕೂಲ ಪಡೆಯಲು ರೈತರು ಯಾರನ್ನು ಸಂಪರ್ಕಿಸಬೇಕು;

ಇ) ಕೃಷಿ ಉತ್ಪನ್ನ ಬೆಳೆಯುವ ರೈತರಿಗೆ ಸರ್ಕಾರದ ಲಭ್ಯ ಯೋಜನೆಗಳು, ಅನುದಾನ, ರಿಯಾಯಿತಿ ಹಾಗೂ ಸಹಾಯಧನ ಯಾವುದಿದೆ; ವಿವರಿಸುವುದು;

ಈ) ಹೊಸದಾಗಿ ಯಾವುದಾದರೂ ಕೃಷಿ ಬೆಳೆ ಜಿಲ್ಲೆಯಲ್ಲಿ ಬೆಳೆಯಲು ಸಾಧ್ಯವೇ; ಈ ಕುರಿತು ರೈತರಿಗೆ ಜಾಗೃತಿ, ಮನವರಿಕೆ ಹಾಗೂ ಅರಿವು ಮೂಡಿಸುವ ಕೆಲಸ ಇಲಾಖೆಯಿಂದ ಆಗುತ್ತದೆಯೇ;

ಉ) ಜಿಲ್ಲೆಯ ರೈತರು ಬೆಳೆಯುವ ಪ್ರಕೃತಿ ವಿಕೋಪದಿಂದ ಹಾನಿಗೆ ಒಳಗಾಗುವುದು ಸಾಮಾನ್ಯವಾಗಿದ್ದು, ಅದಕ್ಕೆ ಇಲಾಖೆಯಿಂದ ಸಿಗುವ ಪರಿಹಾರ ಧನವೆಷ್ಟು; ಯಾವ ರೀತಿ ರೈತರು ಪಡೆದುಕೊಳ್ಳಬೇಕು; ವಿವರಿಸುವುದು;

ಊ) ಬೆಳೆ ನಷ್ಟಕ್ಕೆ ಸರ್ಕಾರದಿಂದ ನೀಡಲಾಗುವ ಪರಿಹಾರ ಮೊತ್ತ ಬಹಳ ಕಡಿಮೆ ಎನ್ನುವುದು ಇಲಾಖೆಯ ಅರಿವಿಗೆ ಬಂದಿದೆಯೇ; ಅದರ ಹೆಚ್ಚಳದ ಪ್ರಸ್ತಾವನೆ ಏನಾದರೂ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಕೈಗೊಳ್ಳುವ ಕ್ರಮಗಳೇನು?

ಶ್ರೀ ಕೃಷ್ಣ ಬೈರೇಗೌಡ (ಕೃಷಿ ರಾಜ್ಯ ಸಚಿವರು)

ಅ) ಚಿಕ್ಕಬಳ್ಳಾಪುರ ಕೃಷಿ ಪ್ರಧಾನ ಹಾಗೂ ಹೊಸದಾಗಿ ನಿರ್ಮಾಣಗೊಂಡಿರುವ ಜಿಲ್ಲೆಯಾಗಿದ್ದು, ಜಿಲ್ಲೆಯಲ್ಲಿ ಕೃಷಿ ಭಾಗ್ಯ, ಕೃಷಿ ಉಪಕರಣಗಳ ಬಾಡಿಗೆ ಆಧಾರಿತ ಸೇವಾ ಕೇಂದ್ರಗಳ ಸ್ಥಾಪನೆ,

ಭೂಚೇತನ, ಹಾಗೂ ರಾಗಿ ಮತ್ತು ಜೋಳ ಉತ್ಪಾದಕತೆ ಹೆಚ್ಚಿಸುವ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

1. ಕೃಷಿ ಭಾಗ್ಯ ಯೋಜನೆಯಡಿ ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ ಮಳೆಯಾಶ್ರಿತ ಪ್ರದೇಶದ ಕೃಷಿಯನ್ನು ಸುಸ್ಥಿರಗೊಳಿಸಲು ಸರ್ಮಪಕ ಮಳೆ ನೀರಿನ ಸಂಗ್ರಹಣೆ ಹಾಗೂ ಉಪಯುಕ್ತ ಬಳಕೆಯಿಂದ ಉತ್ಪಾದಕತೆ ಹೆಚ್ಚಿಸಿ ರೈತರ ಆದಾಯವನ್ನು ಹೆಚ್ಚಿಸಲು ಕಾರ್ಯಕ್ರಮವನ್ನು ಅನುಷ್ಠನಗೊಳಿಸಲಾಗುತ್ತಿದೆ. ಅದರಂತೆ ಜಿಲ್ಲೆಯಲ್ಲಿ ಮೊದಲನೆ ಹಂತದಲ್ಲಿ ಒಟ್ಟು 1260 ರೈತರು ಪ್ರಯೋಜನವನ್ನು ಪಡೆಯಲ್ಲಿದ್ದು ಈಗಾಗಲೇ ಇದಕ್ಕಾಗಿ ರೂ. 2109.5 ಲಕ್ಷಗಳು ಬಿಡುಗಡೆಯಾಗಿರುತ್ತದೆ.

2. ಕೃಷಿ ಉಪಕರಣಗಳ ಬಾಡಿಗೆ ಆಧಾರಿತ ಸೇವಾ ಕೇಂದ್ರಗಳ ಸ್ಥಾಪನೆ ಯೋಜನೆಯಡಿ ಪ್ರತಿ ತಾಲ್ಲೂಕಿನ ಒಂದು ಹೋಬಳಿಯಲ್ಲಿ ಒಂದು ಕೇಂದ್ರದಂತೆ ಒಟ್ಟು ಆರು ಕೇಂದ್ರಗಳನ್ನು ಸ್ಥಾಪಿಸಲಾಗಿರುತ್ತದೆ. ಸದರಿ ಯೋಜನೆಯಡಿ ಶೇ. 75ರ ಸಹಾಯಧನದ ಮೊತ್ತ ರೂ. 225 ಲಕ್ಷಗಳ ಕಾರ್ಯಕ್ರಮದ ಪೈಕಿ ಪ್ರಸ್ತುತ ಒಟ್ಟು ರೂ. 132.9 ಲಕ್ಷಗಳ ಮೌಲ್ಯದ ಕೃಷಿ ಉಪಕರಣಗಳನ್ನು ದಾಸ್ತಾನು ಮಾಡಲಾಗಿದೆ.

3. ಭೂಚೇತನ ಯೋಜನೆಯಡಿ ಖುಷ್ಕಿ ಪ್ರದೇಶದಲ್ಲಿ ಇಳುವರಿ ಹೆಚ್ಚಿಸಲು ರೈತರ ತರಬೇತಿ, ಪ್ರಾತ್ಯಕ್ಷಿಕೆ ಏರ್ಪಡಿಸುವಿಕೆ ಮತ್ತು ವಿವಿಧ ಪರಿಕರಗಳನ್ನು ಶೇ. 50 ರಿಯಾಯಿತಿಯಲ್ಲಿ ವಿತರಿಸಲಾಗುತ್ತಿದೆ, ಪ್ರಸ್ತುತ ವರ್ಷದಲ್ಲಿ ರೂ. 195 ಲಕ್ಷಗಳು ಬಿಡುಗಡೆಯಾಗಿದ್ದು ಇದರ ಪೈಕಿ ರೂ. 140.77 ಲಕ್ಷಗಳು ವೆಚ್ಚವಾಗಿರುತ್ತದೆ.

4. ರಾಗಿ ಮತ್ತು ಜೋಳ ಉತ್ಪಾದಕತೆ ಹೆಚ್ಚಿಸುವ ಯೋಜನೆಯಡಿ ಜಿಲ್ಲೆಯಲ್ಲಿ ರಾಗಿ ಬೆಳೆ ಉತ್ಪಾದಕತೆ ಹೆಚ್ಚಿಸಲು 1250 ಹೆಕ್ಟೇರ್ ಪ್ರದೇಶದಲ್ಲಿ ಪ್ರಾತ್ಯಕ್ಷಿಕೆಯನ್ನು ಕೈಗೊಳ್ಳಲಾಗಿದೆ. ಇದಕ್ಕಾಗಿ ರೈತರಿಗೆ ರೂ. 36.00 ಲಕ್ಷಗಳ ಬಿತ್ತನೆ ಬೀಜ ಮತ್ತು ಇತರೆ ಪರಿಕರಗಳನ್ನು ಉಚಿತವಾಗಿ ವಿತರಿಸಲಾಗಿರುತ್ತದೆ.

ಆ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆಗಳ ಇಳುವರಿಯನ್ನು ಹೆಚ್ಚಿಸಲು ರೈತರನ್ನು ತೋಟಗಾರಿಕೆ ಇಲಾಖಾವತಿಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಈ ಕೆಳಕಂಡಂತಿರುತ್ತದೆ.

1. ಕೇಂದ್ರ ಪುರಸ್ಕೃತ ರಾಷ್ಟ್ರೀಯ ಸುಸ್ಥಿರ ಬೇಸಾಯ
2. ರಾಷ್ಟ್ರೀಯ ತೋಟಗಾರಿಕೆ ಮಿಷನ್
    ಅ. ಸಮಗ್ರ ಕೀಟ/ರೋಗ ನಿಯಂತ್ರಣ ಮತ್ತು ಸಮಗ್ರ ಪೋಷಕಾಂಶ ನಿರ್ವಹಣೆ
    ಆ. ತರಕಾರಿ ಬೆಳೆಯಲ್ಲಿ ಪ್ಲಾಸ್ಟಿಕ್ ಹೊಂದಿಕೆ
    ಇ. ಜೀವಸಾರ ಉತ್ಪಾದನಾ ಘಟಕ (ಬರೋ ಡೈಜೆಸ್ಟರ್) ಎರಹುಳ ಘಟಕ
    ಈ. ಸಂರಕ್ಷಿತ ಬೇಸಾಯ
3. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ
4. ಹೂ ಕೃಷಿಗೆ ಉತ್ತೇಜನ
5. ಸಮಗ್ರ ತೋಟಗಾರಿಕಾ ಅಭಿವೃದ್ಧಿ
6. ತೋಟಗಾರಿಕೆ ಬೆಳೆಗಳ ಕೀಟ ಮತ್ತು ರೋಗಗಳ ಸಮಗ್ರ ನಿಯಂತ್ರಣ ಯೋಜನೆ
7. ಮಧುವನ ಮತ್ತು ಜೇನು ಸಾಕಾಣೆ ಅಭಿವೃದ್ಧಿ

8. ಹನಿ ನೀರಾವರಿಗಾಗಿ ಕೇಂದ್ರವಲಯ ಯೋಜನೆ

9. ಜೇನು ಸಾಕಾಣೆ

10. ರೈತರಿಗೆ ಸಹಾಯ

11. ರೈತರಿಗಾಗಿ ತರಬೇತಿ

ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಅನುಕೂಲ ಪಡೆಯಲು ರೈತರು ಈ ಕೆಳಕಂಡ ಅಧಿಕಾರಿಗಳನ್ನು ಸಂಪರ್ಕಿಸಬಹುದು.

ಅ) ತೋಟಗಾರಿಕೆ ಉಪ ನಿರ್ದೇಶಕರು, ಚಿಕ್ಕಬಳ್ಳಾಪುರ ಜಿಲ್ಲೆ

ಆ) ಸಂಬಂಧಿಸಿದ ತಾಲ್ಲೂಕು ಮಟ್ಟದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು/ಸಹಾಯಕ ತೋಟಗಾರಿಕೆ ನಿರ್ದೇಶಕರು.

ಇ) ಸಂಬಂಧಿಸಿದ ಹೋಬಳಿ ಮಟ್ಟದ ಸಹಾಯಕ ತೋಟಗಾರಿಕೆ ಅಧಿಕಾರಿಗಳು

ಇ) ಕೃಷಿ ಉತ್ಪನ್ನ ಬೆಳೆಯುವ ರೈತರಿಗೆ ಕೃಷಿ ಇಲಾಖೆಯಿಂದ ಲಭ್ಯವಿರುವ ಯೋಜನೆಗಳ ವಿವರಗಳನ್ನು ಅನುಬಂಧ–1 ರಲ್ಲಿ ನೀಡಲಾಗಿದೆ.

ಈ) ಜಿಲ್ಲೆಯಲ್ಲಿ ರಾಗಿ ಬೆಳೆಯು ಪ್ರಮುಖವಾಗಿದ್ದು ನೂತನ ತಳಿಗಳಾದ GPU-48 & ML-365 ತಳಿಗಳನ್ನು ವಿತರಿಸಲು ಕ್ರಮ ಕೈಗೊಳ್ಳಲಾಗಿದೆ. ಹಾಗೂ ತೊಗರಿ ಬೆಳೆಯಲ್ಲಿ ಇಳುವರಿ ಹೆಚ್ಚಿಸುವ ಉದ್ದೇಶದಿಂದ ಬಿತ್ತನೆಯನ್ನು ಊರುವುದು (Dibbling Method), ಕುಡಿ ಚಿವುಟುವಿಕೆ ಪದ್ಧತಿಗಳನ್ನು ಅಳವಡಿಸಲು ಪ್ರಾತ್ಯಕ್ಷಿಕೆಗಳನ್ನು ಕೈಗೊಳ್ಳಲಾಗಿರುತ್ತದೆ. ಮುಂದುವರೆದು ನೆಲಗಡಲೆ ಬೆಳೆಯಲ್ಲಿ ಕೆ–6 ನೂತನ ಬಿತ್ತನೆ ಬೀಜವನ್ನು ರಿಯಾಯಿತಿಯಲ್ಲಿ ವಿತರಿಸಲಾಗಿರುತ್ತದೆ. ವಿವಿಧ ಕೃಷಿ ಬೆಳೆಗಳಲ್ಲಿ ನೂತನ ತಾಂತ್ರಿಕತೆಗಳನ್ನು ಅಳವಡಿಕೆ ಮಾಡಲು

ಇಲಾಖೆಯ ವಿವಿಧ ಯೋಜನೆಗಳಡಿ ಗ್ರಾಮ/ಹೋಬಳಿ/ತಾಲ್ಲೂಕು/ ಜಿಲ್ಲಾ ಮಟ್ಟದಲ್ಲಿ ರೈತರಿಗೆ ತರಬೇತಿಗಳು, ರೈತರಿಗೆ ಕಲಿಕಾ ಪ್ರವಾಸ ಹಾಗೂ ಪ್ರಾತ್ಯಕ್ಷಿಕೆಗಳ ಮೂಲಕ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಇಲಾಖೆಯಿಂದ ಕೈಗೊಳ್ಳಲಾಗುತ್ತಿದೆ.

ಊ) ಕೇಂದ್ರ ಸರ್ಕಾರದ ಎಸ್.ಆರ್. ಡಿಎಫ್/ಎನ್‌ಡಿ ಆರ್.ಎಫ್ ಮಾರ್ಗಸೂಚಿಯ ಪ್ರಕಾರ ಬೆಳೆ ನಷ್ಟಕ್ಕೆ ಕೆಳಕಂಡಂತೆ ಪರಿಹಾರ ನೀಡಲಾಗುವುದು. (ಗರಿಷ್ಟ 2 ಹೆಕ್ಟೇರ್ ಮೀರದಂತೆ)

1. ಮಳೆಯಾಶ್ರಿತ ಬೆಳೆಗಳಿಗೆ ರೂ. 4,500/–
2. ನೀರಾವರಿ ಬೆಳೆಗಳಿಗೆ ರೂ. 9,000/–
3. ಬಹು ವಾರ್ಷಿಕ ಬೆಳೆಗಳಿಗೆ ರೂ. 12,000/–

ಋ) ಹೌದು,

2013–14ನೇ ಸಾಲಿನ ಫೆಬ್ರವರಿ ಮಾರ್ಚ್ 10ನೇ ತಾರೀಖಿನ ಅವಧಿಯಲ್ಲಿ ಬಿದ್ದ ಆಲಿಕಲ್ಲು ಮಳೆಯಿಂದ ಹಾನಿಯಾದ ಪ್ರಕರಣಗಳಿಗೆ ಮಾರ್ಗಸೂಚಿ ದರಕ್ಕಿಂತ ಹೆಚ್ಚುವರಿ ದರದಲ್ಲಿ (ಗರಿಷ್ಟ 2 ಹೆಕ್ಟೇರ್‌ಗೆ ಸೀಮಿತಗೊಳಿಸಿ) ವಿಶೇಷ ಪ್ರಕರಣವೆಂದು ಪರಿಗಣಿಸಿ ಈ ಕೆಳಕಂಡಂತೆ ಪರಿಹಾರ ನೀಡಲಾಗಿದೆ.

1. ಮಳೆಯಾಶ್ರಿತ ಬೆಳೆಗಳಿಗೆ ರೂ. 15,000/–
2. ನೀರಾವರಿ ಬೆಳೆಗಳಿಗೆ ರೂ. 25,000/–
3. ಬಹು ವಾರ್ಷಿಕ ಬೆಳೆಗಳಿಗೆ ರೂ. 40,000/–

ಅನುಬಂಧ-I

ಕೃಷಿ ಉತ್ಪನ್ನ ಬೆಳೆಯುವ ರೈತರಿಗೆ ಕೃಷಿ ಇಲಾಖೆಯಿಂದ ಲಭ್ಯವಿರುವ ಯೋಜನೆಗಳ ವಿವರ

ರಾಜ್ಯವಲಯ ಯೋಜನೆಗಳು:

1. ಬೀಜಗಳ ಪೂರೈಕೆ ಮತ್ತು ಇತರೆ ಹೂಡುವಳಿ: (2401-00-103-0-15)

ಅ ಬೀಜಗಳ ಪೂರೈಕೆ ಮತ್ತು ಸ್ವಬೀಜಾಭಿವೃದ್ಧಿ: ಈ ಕಾರ್ಯಕ್ರಮದಡಿ ರಿಯಾಯಿತಿ ದರದಲ್ಲಿ ಪ್ರಮುಖ ಬೆಳೆಗಳ ಹೈಬ್ರಿಡ್, ಅಧಿಕ ಇಳುವರಿ ತಳಿಗಳು ಮತ್ತು ತಳಿಗಳ ಉತ್ತಮ ಗುಣಮಟ್ಟದ ಪ್ರಮಾಣಿತ ಹಾಗೂ ನಿಜಚೀಟಿ ಬಿತ್ತನೆ ಬೀಜಗಳನ್ನು ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ರಿಯಾಯಿತಿ ದರದಲ್ಲಿ ವಿತರಿಸಲಾಗುವುದು ಹಾಗೂ ಸ್ವಬೀಜಾಭಿವೃದ್ಧಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುವುದು

ಆ. ರಾಗಿ ಮತ್ತು ಜೋಳದ ಉತ್ಪಾದನೆ ಹೆಚ್ಚಿಸಲು ವಿಶೇಷ ಪ್ರೋತ್ಸಾಹ (ಹೊಸ ಕಾರ್ಯಕ್ರಮ): ರಾಗಿ ಮತ್ತು ಜೋಳ ರಾಜ್ಯದ ಪ್ರಮುಖ ಪೌಷ್ಟಿಕಯುಕ್ತ ಆಹಾರ ಧಾನ್ಯ ಬೆಳೆಗಳಾಗಿದ್ದು, ಈ ಬೆಳೆಗಳ ಉತ್ಪಾದಕತೆ ಹೆಚ್ಚಿಸಲು ನೂತನ ತಾಂತ್ರಿಕತೆಗಳ ಅಳವಡಿಕೆಗೆ ವಿಶೇಷ ಪ್ಯಾಕೇಜ್ ಅನ್ನು ನೀಡಲಾಗುವುದು ಇದರಲ್ಲಿ ಸುಧಾರಿತ ತಳಿಗಳ ಕಿರುಚೀಲ ವಿತರಣೆ, ಸಮಗ್ರ ತಾಂತ್ರಿಕತೆಗಳ ಅಳವಡಿಕೆ, ಸುಧಾರಿತ ಯಂತ್ರೋಪಕರಣಗಳ ಬಳಕೆ, ಬೀಜೋತ್ಪಾದನೆ ಮತ್ತು ಸಂಸ್ಕರಣೆಗೆ ಪ್ರೋತ್ಸಾಹವನ್ನು ನೀಡಲಾಗುವುದು.

ಇ ಮಣ್ಣು ಆರೋಗ್ಯ ಕೇಂದ್ರಗಳು-ಜೈವಿಕ ಗೊಬ್ಬರಗಳ ಜನಪ್ರಿಯತೆ: ಈ ಕಾರ್ಯಕ್ರಮದಡಿ ರಾಜ್ಯ ಜೈವಿಕ ಗೊಬ್ಬರ ಪರೀಕ್ಷಾಗಾಲಯಗಳಲ್ಲಿ ಜೈವಿಕ ಗೊಬ್ಬರಗಳನ್ನು ಉತ್ಪಾದನೆ ಮಾಡಿ ರೈತರಿಗೆ ವಿತರಿಸಲು ಹಾಗೂ ಸುಸ್ಥಿರ ಕೃಷಿಯನ್ನು ಉತ್ತೇಜಿಸಲು ಜೈವಿಕ ಗೊಬ್ಬರಗಳ ಬಳಕೆಯನ್ನು ಪ್ರಚಾರಗೊಳಿಸಲಾಗುವುದು.

ಈ. ಸಸ್ಯ ಸಂರಕ್ಷಣೆ- ಕೀಟನಾಶಕ ನಿಯಂತ್ರಣ ಪರೀಕ್ಷಾಗಾಲೆ. ಈ ಕಾರ್ಯಕ್ರಮದಡಿ ರಿಯಾಯಿತಿ ದರದಲ್ಲಿ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಕಾರಕಗಳ ವಿತರಣೆ, ವೈಜ್ಞಾನಿಕ ಧಾನ್ಯ ಸಂಗ್ರಹಣೆಗಾಗಿ ಸುಧಾರಿತ ಪೆಟ್ಟಿಗೆ ವಿತರಣೆ, ರಿಯಾಯಿತಿಯಲ್ಲಿ ರಾಸಾಯನಿಕ ಪೀಡೆನಾಶಕಗಳ ವಿತರಣೆ ಮತ್ತು ಗುಣ ನಿಯಂತ್ರಣದ ಬಗ್ಗೆ ವಿಸ್ತರಣಾ ಸಿಬ್ಬಂದಿ ಹಾಗೂ ರೈತರಿಗೆ ತರಬೇತಿಗಳನ್ನು ಏರ್ಪಡಿಸಲಾಗುತ್ತಿದೆ.

ಊ. ಮಣ್ಣಿನ ಸತ್ವ ಹೆಚ್ಚಿಸುವಿಕೆ: ಈ ಕಾರ್ಯಕ್ರಮದಡಿ ಬಯೋಡೈಜೆಸ್ಟರ್, ಎರೆಹುಳು ಘಟಕ ಸ್ಥಾಪನೆಗೆ ಸಹಾಯಧನ ಮತ್ತು ಜೈವಿಕ ಗೊಬ್ಬರ, ಸಾವಯವ ಗೊಬ್ಬರ ಮತ್ತು ಲಘು ಪೋಷಕಾಂಶಗಳನ್ನು ಶೇ 50ರ ರಿಯಾಯಿತಿಯಲ್ಲಿ ವಿತರಿಸಲಾಗುವುದು.

ಋ.- ಕೃಷಿ ಯಾಂತ್ರೀಕರಣ: ಈ ಯೋಜನೆಯಡಿ ರೈತರಿಗೆ ಕೃಷಿ ಯಾಂತ್ರೀಕರಣದಲ್ಲಿ ಹೈಟೆಕ್ ಕೃಷಿ ಯಂತ್ರೋಪಕರಣ, ಪವರ್ ಟಿಲ್ಲರ್, ಡೀಸೆಲ್ ಪಂಪು ಸೆಟ್ಟು, ಟ್ರಾಕ್ಟರ್ /ಟಿಲ್ಲರ್ ಮೌಂಟೆಡ್ ಸಲಕರಣೆಗಳು, ನವೀನ ಕೃಷಿ ಯಂತ್ರೋಪಕರಣಗಳನ್ನು ಎಸ್-1 ದರಕ್ಕೆ ಶೇ.50 ರ ರಿಯಾಯಿತಿ ದರದಲ್ಲಿ ಹಾಗೂ ಪರಿಶಿಷ್ಟ ಜಾತಿ/ ಪಂಗಡ ರೈತರಿಗೆ ಶೇ.90ರ ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತಿದೆ

ಎ. ಕೃಷಿ ಯಂತ್ರೋಪಕರಣಗಳ ಬಾಡಿಗೆ ಆಧಾರಿತ ಸೇವಾ ಕೇಂದ್ರಗಳ ಸ್ಥಾಪನೆ: ಕೃಷಿ ಚಟುವಟಿಕೆಗಳನ್ನು ಸಕಾಲದಲ್ಲಿ ಕೈಗೊಳ್ಳಲು, ಕೃಷಿ ಯಂತ್ರೋಪಕರಣಗಳ ಬಾಡಿಗೆ ಆಧಾರಿತ ಸೇವಾ ಕೇಂದ್ರಗಳನ್ನು ತೆರೆದು ರೈತರಿಗೆ ಸಕಾಲದಲ್ಲಿ ಕೃಷಿ ಯಂತ್ರೋಪಕರಣಗಳನ್ನು ಒದಗಿಸುವ ಸಲುವಾಗಿ ಕೃಷಿ ಯಂತ್ರೋಪಕರಣಗಳ ಬಾಡಿಗೆ ಆಧಾರಿತ ಸೇವಾ ಕೇಂದ್ರಗಳನ್ನು ನೋಂದಾಯಿತ ಚಾರಿಟಬಲ್ ಟ್ರಸ್ಟಗಳು/ ಸಂಘ ಸಂಸ್ಥೆಗಳು ಹಾಗೂ ಸರ್ಕಾರೇತರ ಸಂಸ್ಥೆಗಳ ಮೂಲಕ ಸ್ಥಾಪನೆ ಮಾಡಲಾಗುವುದು.

ಏ. ಕೃಷಿ ಉತ್ಪನ್ನಗಳ ಸಂಸ್ಕರಣೆ: ಈ ಕಾರ್ಯಕ್ರಮಧಡಿ ಪರಿಶಿಷ್ಟ ಜಾತಿ/ ಪಂಗಡ ರೈತರಿಗೆ ಶೇ.90ರ ರಿಯಾಯಿತಿ ದರದಲ್ಲಿ ಮತ್ತು ಇತರೆ ರೈತರಿಗೆ ಶೇ. 50 ರಿಯಾಯಿತಿ ದರದಲ್ಲಿ ಕೃಷಿ ಸಂಸ್ಕರಣಾ ಘಟಕಗಳು ಹಾಗೂ ಟಾರ್ಪಾಲಿನ್‌ಗಳನ್ನು ವಿತರಣೆ ಮಾಡಲಾಗುತ್ತಿದೆ.

3. ಸಾವಯವ ಕೃಷಿ (2401-00-104-0-12)

ಕೃಷಿ ಇಲಾಖೆಯು ರಾಜ್ಯದ ಎಲ್ಲ ತಾಲ್ಲೂಕುಗಳಲ್ಲಿ ಒಟ್ಟು 100 ಹೆಕ್ಟೇರ್ ಪ್ರದೇಶದಲ್ಲಿ ಸಾವಯವ ಗ್ರಾಮ ಕಾರ್ಯಕ್ರಮವನ್ನು ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಹಮ್ಮಿಕೊಂಡಿರುತ್ತದೆ ಹೆಚ್ಚಿನ ಸಾವಯವ ಗೊಬ್ಬರವನ್ನು ಬಳಸುವ ನಿಟ್ಟಿನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಸಾವಯವ ಗೊಬ್ಬರವನ್ನು ತಯಾರಿಸಿ ವಿತರಣೆ ಮಾಡುವ ಅವಶ್ಯಕತೆ ಇರುತ್ತದೆ ಸಾವಯವ ಕೃಷಿ ಗ್ರಾಮ ಯೋಜನೆಯನ್ನು 100 ಹೆಕ್ಟೇರ್ ಪ್ರದೇಶದಲ್ಲಿ ಹೋಬಳಿ ಮಟ್ಟಕ್ಕೆ ವಿಸ್ತರಿಸಲು ಯೋಜಿಸಲಾಗಿದ್ದು, ಸಾವಯವ ಕೃಷಿಗೆ ಉತ್ತೇಜನ, ಸಾವಯವ ಗೊಬ್ಬರಗಳ ತಯಾರಿಕೆ ಮತ್ತು ವಿತರಣೆಗೆ ಉತ್ತೇಜನ, ಆ ಪ್ರದೇಶಗಳಲ್ಲಿ ಬೆಳೆಯು ಸಾವಯವ ಉತ್ಪನ್ನಗಳಿಗೆ ಮಾರುಕಟ್ಟೆ ಸಂಪರ್ಕ ಒದಗಿಸುವ ಕಾರ್ಯವನ್ನೂ ಸಹ ಹಮ್ಮಿಕೊಳ್ಳಲಾಗುವುದು

4 ಬೇಸಾಯ ಸಂಬಂಧಿತ ಚಟುವಟಿಕೆಗಳು. (2401-00-109-0-21)

ಅ ಬೇಸಾಯ ಸಂಬಂಧಿತ ಚಟುವಟಿಕೆಗಳು: ಈ ಕಾರ್ಯಕ್ರಮದಡಿ ಕೃಷಿ ವಾರ್ತಾ ಘಟಕ, ಕೃಷಿ ಜಾತ್ರೆ, ವಸ್ತು ಪ್ರದರ್ಶನ, ಕರ ಪತ್ರಗಳನ್ನು ಮುದ್ರಿಸಲು, ಪ್ರದರ್ಶನಗಳು ಮತ್ತು ಜಿಲ್ಲಾ ಕೃಷಿ ತರಬೇತಿ ಕೇಂದ್ರ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುವುದು

ಆ ಭೂಚೇತನ-2: ಈ ಕಾರ್ಯಕ್ರಮದಡಿ ಮಣ್ಣು ಫಲವತ್ತತೆ ಆಧಾರಿತ ಸಮಗ್ರ ಉತ್ಪಾದನಾ ತಾಂತ್ರಿಕತೆಗಳನ್ನು ರೈತರಿಗೆ ಪ್ರಚುರ ಪಡಿಸಲಾಗುತ್ತಿದೆ. ರೈತ ಸಂಪರ್ಕ ಕೇಂದ್ರಗಳ ಮಟ್ಟದಲ್ಲಿ ರೈತ ಕ್ಷೇತ್ರ ಪಾಠಶಾಲೆಗಳು ವಿಷ್ಕಡಿಸಲು, ರೈತ ಅನುವುಗಾರರಿಗೆ ಸಾಮರ್ಥ್ಯವರ್ಧನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು. ಭೂಚೇತನ ಯೋಜನೆಯಡಿ ನಿಯೋಜನೆಗೊಂಡ ರೈತ ಅನುವುಗಾರರಿಗೆ ಸಂಭಾವನೆಯನ್ನು ನೀಡುವುದು, ರೈತರಿಗೆ ತರಬೇತಿ ನೀಡುವುದು, ಗುಚ್ಛ ಗ್ರಾಮಗಳಿಗೆ ಪರಿಕರಗಳ ಸಾಗಾಣಿಕೆಗೆ ಮತ್ತು ಗೋಡೆಬರಹಗಳನ್ನು ಬರೆಸಲು ಅನುದಾನವನ್ನು ವಿನಿಯೋಗಿಸಲಾಗುವುದು

ಇ ಭೂಚೇತನ ಪ್ಲಸ್ (ಗ್ರಾಮೀಣ ಜನರ ಜೀವನೋಪಾಯಗಳನ್ನು ವೃದ್ಧಿಸುವ ಯೋಜನೆ): ಈ ಕಾರ್ಯಕ್ರಮದ ಮುಖ್ಯ ಉದ್ದೇಶ ಬೆಳೆ ಉತ್ಪಾದನೆಯನ್ನು ಶೇ. 20 ರಷ್ಟು ಹಾಗೂ ರೈತರ ಆರ್ಥಿಕ ಮಟ್ಟವನ್ನು ಶೇ 25ರಷ್ಟು ಹೆಚ್ಚಿಸುವುದಾಗಿದೆ. ಈ ಕಾರ್ಯಕ್ರಮವನ್ನು 2013-14ನೇ ಸಾಲಿನಿಂದ 2016-17 ನೇ ಸಾಲಿನವರೆಗೆ ಅನುಷ್ಠಾನಗೊಳಿಸಲಾಗುವುದು 2013-14 ನೇ ಸಾಲಿನಿಂದ ಪ್ರಾಯೋಗಿಕವಾಗಿ ಬಿಜಾಪುರ, ಚಿಕ್ಕಮಗಳೂರು, ರಾಯಚೂರು ಮತ್ತು ತುಮಕೂರು ಜಿಲ್ಲೆಗಳ 10000 ಹೆಕ್ಟೇರ್ ಪ್ರದೇಶದಲ್ಲಿ ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲಾಗಿದೆ 2014-15ನೇ ಸಾಲಿನಲ್ಲಿ ಈ ನಾಲ್ಕು ಜಿಲ್ಲೆಗಳಲ್ಲಿ 20000 ಹೆಕ್ಟೇರ್ ಪ್ರದೇಶದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ

ಈ. ಕೃಷಿ ಮೇಳ: ಈ ಕಾರ್ಯಕ್ರಮದಡಿ ಕೃಷಿ ಮತ್ತು ಸಂಬಂಧಿತ ಇಲಾಖೆಗಳಾದ ತೋಟಗಾರಿಕೆ, ರೇಷ್ಮೆ, ಅರಣ್ಯ, ಪಶುಸಂಗೋಪನೆ, ಜಲಾನಯನ, ಮೀನುಗಾರಿಕೆ ಮತ್ತು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗಳ ಸಹಯೋಗದೊಂದಿಗೆ ಸಮಗ್ರ ಕೃಷಿ ಮಾಹಿತಿ ಹಾಗೂ ಎಲ್ಲಾ ಇಲಾಖೆಗಳಿಂದ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳ ಮಾಹಿತಿಯನ್ನು ವಿಕ ಗವಾಕ್ಷಿ ವಿಸ್ತರಣಾ ಪದ್ಧತಿಯಲ್ಲಿ ಪ್ರಚಾರಪಡಿಸಲಾಗುವುದು.

ಉ ರೈತರ ಅಧ್ಯಯನ ಪ್ರವಾಸ: ಕೃಷಿ ಪಂಡಿತ/ ಕೃಷಿ ಪ್ರಶಸ್ತಿ/ ವಿಶ್ವವಿದ್ಯಾಲಯಗಳಿಂದ ಪ್ರಶಸ್ತಿ ವಿಜೇತ ರೈತರು ಮತ್ತು ಇಲಾಖೆಯ ಅಧಿಕಾರಿಗಳನ್ನು ಕೃಷಿ ಅಧ್ಯಯನಕ್ಕಾಗಿ ಇತರೆ ರಾಜ್ಯಗಳಿಗೆ ಪ್ರವಾಸ ಕರೆದೊಯ್ಯಲಾಗುವುದು

5. ಇತರೆ ಕೃಷಿ ಯೋಜನೆಗಳು: (2401-00-800-1-46)

ಅ ಹಾವು ಕಡಿತಕ್ಕೆ ಪರಿಹಾರ: ಹಾವಿನ ಕಡಿತದಿಂದ, ಮರಗಳಿಂದ ಬಿದ್ದು ಅಥವಾ ಇತರೆ ಕೃಷಿ ಸಂಬಂಧಿತ ಆಕಸ್ಮಿಕಗಳಿಂದ ಮರಣ ಹೊಂದಿದ ರೈತರು ಮತ್ತು ಕೃಷಿ ಕಾರ್ಮಿಕರ ಕುಟುಂಬಗಳಿಗೆ ರೂ.1.00 ಲಕ್ಷ ಸಹಾಯ ನೀಡಲಾಗುವುದು ಹಾಗೂ ಬೆಂಕಿ ಆಕಸ್ಮಿಕದಿಂದ ಹುಲ್ಲು ಮೆದೆ/ ಬಣವೆಗಳು ನಷ್ಟವಾದ ಪ್ರಕರಣದಲ್ಲಿ ರೂ.10000/- ದವರೆಗೆ ಪರಿಹಾರ ನೀಡಲಾಗುವುದು

ಆ. ಬೆಳೆ ಸಾಲಕ್ಕೆ ಸಹಾಯಧನ: ರಾಜ್ಯದ ರೈತರಿಗೆ ನೀಡಿದ ಬೆಳೆ ಸಾಲ/ಅಲ್ಪಾವಧಿ ಸಾಲಕ್ಕೆ ನಿಗದಿತ ಅವಧಿಯಲ್ಲಿ ಸಾಲ ಮರುಪಾವತಿ ಮಾಡಿದ ರೈತರಿಗೆ ಕೇ.ಸಿ.ಸಿ ಬಡ್ಡಿ ರಿಯಾಯಿತಿ ನೀಡಲು (ಸರ್ಕಾರಿ ಸ್ವಾಮ್ಯದ ವಾಣಿಜ್ಯ ಬ್ಯಾಂಕುಗಳು ಹಾಗು ಪ್ರಾದೇಶಿಕ ಗ್ರಾಮೀಣಾಭಿವೃದ್ಧಿ ಬ್ಯಾಂಕುಗಳ ಮೂಲಕ ಗರಿಷ್ಠ ರೂ 1,00,000/- ಮಿತಿಯೊಳಗೆ) ಬಳಸಿಕೊಳ್ಳಲಾಗುವುದು

ಇ ಕೃಷಿ ಬೆಲೆ ಆಯೋಗ ರಾಷ್ಟ್ರೀಯ ವೆಚ್ಚ ಮತ್ತು ಬೆಲೆ ಆಯೋಗದ (National Commission for Agriculture Costs and Prices) ವ್ಯಾಪ್ತಿಗೆ ಒಳಪಡುವ ಕೃಷಿ ಸರಕುಗಳ ಬೆಲೆ ನೀತಿಯ ಬಗ್ಗೆ ಸರ್ಕಾರಕ್ಕೆ ಸಲಹೆ ನೀಡುವುದು, ವೆಚ್ಚ ಮತ್ತು ಬೆಲೆ ಆಯೋಗದ ವ್ಯಾಪ್ತಿಗೆ ಒಳಪಡುವ ಎಲ್ಲ ಬೆಳೆಗಳಿಗೆ ಬೆಂಬಲ ಬೆಲೆಯನ್ನು ಶಿಫಾರಸ್ಸು ಮಾಡುವುದು. ಆಯೋಗದ ಆಡಳಿತ ವೆಚ್ಚವನ್ನು ಭರಿಸಲಾಗುವುದು

ಈ ಗ್ರಾಮೀಣ ಗೋದಾಮುಗಳಿಗೆ ಬಡ್ಡಿ ಸಹಾಯಧನ. ಪ್ರಮುಖ ಬೆಳೆಗಳ ಉತ್ಪನ್ನಗಳನ್ನು ಹವಾಮಾನ ವೈಪರೀತ್ಯಗಳಿಂದ ಸಂರಕ್ಷಿಸಿ, ವೈಜ್ಞಾನಿಕವಾಗಿ ಸಂಗ್ರಹಣೆ ಮಾಡಿ ಮಾರುಕಟ್ಟೆಯಲ್ಲಿ ಉತ್ತಮ ದಾರಣೆ ಬಂದಾಗ ಮಾರಾಟ ಮಾಡಲು ಗ್ರಾಮೀಣ ಪ್ರದೇಶಗಳಲ್ಲಿ ಗೋದಾಮುಗಳನ್ನು ನಿರ್ಮಾಣಮಾಡಲು ಮುಂದೆ ಬರುವ ರೈತರು/ ಗುಂಪುಗಳು/ಸರ್ಕಾರೇತರ ಸಂಸ್ಥೆಗಳು, ವಾಣಿಜ್ಯ ಗ್ರಾಮೀಣ ಹಾಗೂ ಪ್ರಾದೇಶಿಕ ಗ್ರಾಮೀಣ ಬ್ಯಾಂಕ್‌ಗಳಿಂದ ಪಡೆದ ಸಾಲದ ಮೇಲಿನ ಬಡ್ಡಿಯನ್ನು ಪಾವತಿಸಲು ಬಡ್ಡಿ ಸಹಾಯಧನವನ್ನು ನೀಡಲಾಗುವುದು

6 ಕೃಷಿ ಭಾಗ್ಯ (ಹೊಸ ಯೋಜನೆ) : (2401-00-800-1-68)

ರಾಜ್ಯದ ಐದು ಪ್ರಮುಖ ಒಣವಲಯಗಳ ಕೃಷಿ ಚಟುವಟಿಕೆಗಳನ್ನು ಕೇಂದ್ರೀಕರಿಸಲು ಉದ್ದೇಶಿಸಿ ಮಳೆ ಆಶ್ರಿತ ಕೃಷಿ ನೀತಿ 'ಕೃಷಿ ಭಾಗ್ಯ' ವನ್ನು ಜಾರಿಗೆ ತರಲಾಗುತ್ತಿದೆ. ನೀತಿಯಲ್ಲಿ ಮಳೆ ನೀರಿನ ಸಂರಕ್ಷಣೆ, ಸಂಗ್ರಹಣೆ ಹಾಗೂ ಉಪಯುಕ್ತ ಬಳಕೆ, ಲಾಭದಾಯಕ ಬೆಳೆ ಪದ್ಧತಿಗಳ ಅಳವಡಿಕೆ, ಉತ್ತಮ ಆದಾಯ ತರುವ ತೋಟಗಾರಿಕೆ ಬೆಳೆಗಳು, ಪಶು ಸಂಗೋಪನಾ ಚಟುವಟಿಕೆಗಳು, ಸಂಸ್ಕರಣಾ ಉದ್ದಿಮೆಗಳಿಗೆ, ಕೃಷಿ ವಲಯಕ್ಕೆ ಸಂಬಂಧಿಸಿದ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಪ್ರೋತ್ಸಾಹ ನೀಡುವುದರ ಮೂಲಕ ಕೃಷಿಯಲ್ಲಿ ಸುಸ್ಥಿರ ಅಭಿವೃದ್ಧಿಯ ಆಶಯ ಹೊಂದಲಾಗಿದೆ

---

6. ರಾಜ್ಯ ಯೋಜನೆಗಳು: (4401-00-001-1-01)

ಅ. ರೈತ ಸಂಪರ್ಕ ಕೇಂದ್ರಗಳು: ರಾಜ್ಯದಲ್ಲಿ ರೈತರಿಗೆ ಅವಶ್ಯವಿರುವ ಕೃಷಿ ಪರಿಕರಗಳು ಹಾಗೂ ತಾಂತ್ರಿಕತೆಯನ್ನು ಒದಗಿಸಲು ಹೋಬಳಿ ಮಟ್ಟದಲ್ಲಿ 747 ರೈತ ಸಂಪರ್ಕ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಈ ಕೇಂದ್ರಗಳ ಮೂಲಕ ರೈತರಿಗೆ ಕೃಷಿಯಲ್ಲಿ ನೂತನ ತಾಂತ್ರಿಕತೆಗಳ ಬಗ್ಗೆ ಜಾಗೃತಿ ನೀಡಲಾಗುತ್ತಿದೆ ಹಾಗೂ ಸಕಾಲದಲ್ಲಿ ಕೃಷಿ ಪರಿಕರಗಳ ಲಭ್ಯತೆಗೆ ಕ್ರಮ ಕೈಗೊಳ್ಳಲಾಗುತ್ತಿದೆ

7. ಸೌರ ಶಕ್ತಿ ಆಧಾರಿತ ನೀರಾವರಿ ಪಂಪ್‌ಸೆಟ್‌ಗಳ ವಿತರಣೆ :

ಕರ್ನಾಟಕ ರಾಜ್ಯದಲ್ಲಿ 18 ಲಕ್ಷ ನೀರಾವರಿ ಪಂಪುಸೆಟ್ಟುಗಳಿದ್ದು; ಇದರ ವಿದ್ಯುತ್ ಬಳಕೆ ಹೆಚ್ಚುತ್ತಿದೆ ವಿದ್ಯುತ್ ಕೊರತೆಯನ್ನು ನೀಗಿಸಲು ಮತ್ತು ಇತ್ತೀಚಿನ ಉತ್ತಮ ತಾಂತ್ರಿಕತೆಯನ್ನು ಬಳಸಲು, ಸಾಧ್ಯವಿರುವ ಸೌರಶಕ್ತಿ ಆಧಾರಿತ ಪಂಪುಸೆಟ್ಟುಗಳನ್ನು ಬಳಸಲು ಸೌರ ಶಕ್ತಿ ಆಧಾರಿತ ನೀರಾವರಿ ಪಂಪ್‌ಸೆಟ್‌ಗಳ ಯೋಜನೆಯನ್ನು ಅನುಷ್ಠಾನ ಮಾಡಲು ಕ್ರಮ ಕೈಗೊಳ್ಳಲಾಗಿದೆ

8 ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಕೃಷಿ ಕುರಿತು ತರಬೇತಿ:

ಕರ್ನಾಟಕ ರಾಜ್ಯದಲ್ಲಿರುವ ವಿವಿಧ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿರುವ ಅಭ್ಯರ್ಥಿಗಳಿಗೆ ಕೃಷಿಯನ್ನು ಒಂದು ವಿಷಯವನ್ನಾಗಿ ಪರಿಗಣಿಸಿ ಆಧುನಿಕ (ಪೈಟೆಕ್) ಕೃಷಿ ಯಂತ್ರೋಪಕರಣ, ಪನಿ/ಹುಂಪುರಿ ನೀರಾವರಿ ಉಪಕರಣಗಳು, ಸಂಸ್ಕರಣಾ ಘಟಕಗಳು ಇತ್ಯಾದಿಗಳ ಕುರಿತು ತರಬೇತಿ ನೀಡಲು ಕ್ರಮ ಕೈಗೊಳ್ಳಲಾಗಿದ್ದು ನಿರುದ್ಯೋಗಿ ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸುವುದು, ಕೌಶಲ್ಯ ತರಬೇತಿಗಳನ್ನು ಪಡೆದ ಅಭ್ಯರ್ಥಿಗಳು ಪುರ ಮತ್ತು ಗ್ರಾಮ ಮಟ್ಟದಲ್ಲಿ ಯಂತ್ರೋಪಕರಣಗಳ ಒಳಕೆ, ನಿರ್ವಹಣೆ ಮಾಡಬಹುದಾಗಿದೆ

9 ರಾಷ್ಟ್ರೀಯ ಬೆಳೆ ವಿಮಾ ಕಾರ್ಯಕ್ರಮ

ಅ ಮಾರ್ಪಡಿಸಿದ ರಾಷ್ಟ್ರೀಯ ಕೃಷಿ ವಿಮಾ ಯೋಜನೆ :

ಮಾರ್ಪಡಿಸಿದ ರಾಷ್ಟ್ರೀಯ ಕೃಷಿ ವಿಮಾ ಯೋಜನೆಯು ಕೇಂದ್ರ ಸರ್ಕಾರವ ಯೋಜನೆಯಾಗಿದ್ದು, 2013-14ರ ಹಿಂಗಾರು ಹಂಗಾಮಿನಿಂದ ಈ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗಿದೆ ಈ ಯೋಜನೆಯ ಉದ್ದೇಶಗಳು ಕೆಳಗಿನಂತಿವೆ

- ಪ್ರಕೃತಿ ವಿಕೋಪಗಳು, ಕೀಟಗಳು ಮತ್ತು ರೋಗಗಳಿಂದಾಗಿ ಯಾವುದೇ ಅದಿಸೂಚಿತ ಬೆಳೆ ವಿಫಲವಾದ ಪಕ್ಷದಲ್ಲಿ ರೈತರಿಗೆ ವಿಮಾ ರಕ್ಷಣೆ ಮತ್ತು ಹಣಕಾಸು ಬೆಂಬಲ ಒದಗಿಸಲಾಗುವುದು.
- ಕೃಷಿಯಲ್ಲಿ ಪ್ರಗತಿಪರ ಬೇಸಾಯ ಪದ್ಧತಿಗಳನ್ನು, ಹೆಚ್ಚಿನ ಮೌಲ್ಯದ ಪರಿಕರಗಳನ್ನು ಉನ್ನತ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳಲು ರೈತರಿಗೆ ಪ್ರೋತ್ಸಾಹ ನೀಡುವುದು.
- ಕೃಷಿವರಮಾನವು ವಿಶೇಷವಾಗಿವಿಪತ್ತೊದಗಿದವರ್ಷಗಳಲ್ಲಿಸ್ಥಿರವಾಗಿರುವಂತೆಮಾಡಲು ನೆರವಾಗುವುದು.
- ಸ್ಥಳೀಯ ಪ್ರಕೃತಿ ವಿಕೋಪಗಳಾದ ಆಲಿಕಲ್ಲು ಮಳೆ ಮತ್ತು ಬೂ ಕುಸಿತದಿಂದ ಉಂಟಾಗುವ ನಷ್ಟದ ನಿರ್ಧರಣೆಯನ್ನು ವೈಯಕ್ತಿಕವಾಗಿ ನಿರ್ದರಿಸಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲಾಗುವುದು
- ಎಲ್ಲಾ ರೈತರಿಗೆ ಬೆಳೆ ವಿಮಾ ಕಂಪಿನ ಮೇಲೆ ರಿಯಾಯಿತಿಯನ್ನು ನೀಡಲಾಗಿದೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸಮ ಪ್ರಮಾಣದಲ್ಲಿ ಈ ಯೋಜನೆಗೆ ಭಾಗಿಗಳಾಗಿರುತ್ತಾರೆ

ಆ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆ

ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯನ್ನು 2007ರ ಮುಂಗಾರು ಹಂಗಾಮಿನಿಂದ ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ಈ ಯೋಜನೆಯ ಉದ್ದೇಶವೇನೆಂದರೆ ರೈತರಿಗೆ ಹವಾಮಾನ ವೈಪರಿತ್ಯಗಳಿಂದ ಬೆಳೆ ನಷ್ಟ ಉಂಟಾದರೆ ಅಂದರೆ, ಅತಿವೃಷ್ಟಿ, ಅನಾವೃಷ್ಟಿ, ಆರ್ದ್ರತೆ, ಗಾಳಿಯವೇಗ ಮತ್ತು ತಾಪಮಾನಗಳಿಂದ ರಕ್ಷಣೆ ನೀಡುತ್ತದೆ.

10 ಕೃಷಿ ಪರಿಕರಗಳ ಗುಣ ನಿಯಂತ್ರಣ: ಕೃಷಿಯ ಮೂರು ಪ್ರಮುಖ ಪರಿಕರಗಳಾದ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಪೀಡೆನಾಶಕಗಳ ಗುಣ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಲಾಗಿದೆ.

ಕೇಂದ್ರ ಪುರಸ್ಕೃತ ಯೋಜನೆಗಳು:

1 ಆಹಾರ ಸಂಸ್ಕರಣೆ ಮೇಲಣ ರಾಷ್ಟ್ರೀಯ ಕಾರ್ಯಾಚರಣೆ: (2401-00-102-0-07)

ಈ ಯೋಜನೆಯಡಿ ಮೆಗಾ ಫುಡ್ ಪಾರ್ಕ್, ಶೀತಲ ಸರಪಳಿ, ಮೌಲ್ಯವರ್ಧನೆ, ಸಂರಕ್ಷಣೆ, ಸರ್ಕಾರಿ ಕಸಾಯಿಖಾನೆಗಳ ಆಧುನೀಕರಣ, ತಂತ್ರಜ್ಞಾನ ಉನ್ನತೀಕರಣ, ವಿಸ್ತರಣೆ, ಆಹಾರ ಸಂಸ್ಕರಣಾ ಘಟಕಗಳ ಸ್ಥಾಪನೆ, ಆಹಾರ ಸುರಕ್ಷಣೆ, ಕೋಡೆಕ್ಸ್, ಸಂಶೋಧನೆ ಮತ್ತು ಅಭಿವೃದ್ಧಿ ಹಾಗೂ ಉತ್ತೇಜನ ಚಟುವಟಿಕೆಗಳು, ಮಾನವ ಸಂಪನ್ಮೂಲ ಅಭಿವೃದ್ಧಿ ಮತ್ತು ಆಹಾರ ಸಂಸ್ಕರಣಾ ಸಂಸ್ಥೆಗಳ ಬಲವರ್ದನೆ ಕಾರ್ಯಗಳನ್ನು ಕೈಗೊಳ್ಳಲಾಗುವುದು

2 ರಾಷ್ಟ್ರೀಯ ಎಣ್ಣೆಕಾಳು ಮತ್ತು ತಾಳೆಬೆಳೆ ಅಭಿಯಾನ: (2401-00-114-0-01)

ಈ ಯೋಜನೆಯಡಿ ಎಣ್ಣೆಕಾಳು, ದ್ವಿದಳಧಾನ್ಯ ಮತ್ತು ಮುಸುಕಿನ ಜೋಳ ಬೆಳೆಗಳ ಸಮಗ್ರ ಅಭಿವೃದ್ಧಿಗೆ ಉತ್ಪಾದನಾ ಪ್ರಾತ್ಯಕ್ಷಿಕೆ, ಬಿತ್ತನೆ ಬೀಜ, ಜೈವಿಕ ಗೊಬ್ಬರ, ಸಸ್ಯ ಸಂರಕ್ಷಣಾ ಔಷಧಿ ಮತ್ತು ಉಪಕರಣ, ಮಣ್ಣು ಸುಧಾರಕಗಳು ಇತ್ಯಾದಿ ಘಟಕಗಳನ್ನು ರಿಯಾಯಿತಿ ದರದಲ್ಲಿ ರೈತರಿಗೆ ನೀಡಲಾಗುತ್ತಿದೆ ಹಾಗೂ ಬೀಜೋತ್ಪಾದನೆಗೆ ಪ್ರೋತ್ಸಾಹ ನೀಡಲಾಗುತ್ತಿದೆ

3. ಲಘು ನೀರಾವರಿ ಯೋಜನೆ: (2401-00-108-1-15)

ಈ ಯೋಜನೆಯಡಿ ತುಂತುರು ನೀರಾವರಿ ಹಾಗೂ ಹನಿ ನೀರಾವರಿ ಘಟಕಗಳನ್ನು ಶೇ 90ರ ರಿಯಾಯಿತಿ ದರದಲ್ಲಿ ರೈತರಿಗೆ ವಿತರಣೆ ಮಾಡಲಾಗುತ್ತಿದೆ

4. ಕೃಷಿ ತಂತ್ರಜ್ಞಾನ ನಿರ್ವಹಣಾ ಸಂಸ್ಥೆ: (2401-00-800-1-53)

ಈ ಯೋಜನೆಯ ಉದ್ದೇಶ ಕೃಷಿ ವಿಸ್ತರಣೆಯಲ್ಲಿ ತೊಡಗಿರುವ ಕೃಷಿ ಮತ್ತು ಇತರೆ ಅಭಿವೃದ್ಧಿ ಇಲಾಖೆಗಳು, ಸರ್ಕಾರೇತರ ಸಂಘ ಸಂಸ್ಥೆಗಳು, ಸಂಶೋಧನೆ ಹಾಗೂ ತಾಂತ್ರಿಕ ಪ್ರಸಾರ ಘಟಕಗಳ ಮಧ್ಯೆ ಸಮನ್ವಯ ತರುವ ಮೂಲಕ ರೈತರಿಗೆ ಉತ್ತಮ ಗುಣಮಟ್ಟದ ವಿವಿಧ ಇಲಾಖೆಗಳ ವಿಸ್ತರಣಾ ಸೇವೆ ಹಾಗೂ ನೂತನ ತಂತ್ರಜ್ಞಾನಗಳನ್ನು ಒದಗಿಸುವುದಾಗಿದೆ ಈ ಯೋಜನೆಯಡಿ ವಿಸ್ತರಣಾ ಕಾರ್ಯಕರ್ತರನ್ನು ನೇಮಿಸಿ ಪ್ರಾತ್ಯಕ್ಷಿಕೆಗಳು ಹಾಗೂ ತರಬೇತಿಗಳನ್ನು ಕೈಗೊಳ್ಳಲಾಗುತ್ತಿದೆ

ಕೇಂದ್ರ ಯೋಜನಾ ಕಾರ್ಯಕ್ರಮಗಳು:

1 ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (2401-00-800-1-57)

ಈ ಯೋಜನೆಯು ಸಂಪೂರ್ಣ ಕೇಂದ್ರ ಪುರಸ್ಕೃತ (100%) ಯೋಜನೆಯಾಗಿರುತ್ತದೆ. ಈ ಯೋಜನೆಯಲ್ಲಿ ರೈತ ಸಂಪರ್ಕ ಕೇಂದ್ರಗಳ ಬಲವರ್ಧನೆ, ಭೂಚೇತನ, ಬೀಜ ಅಭಿಯಾನ, ರೈತ ಶಕ್ತಿ ಗುಂಪು, ಇಲಾಖಾ ಪ್ರಯೋಗಾಲಯಗಳ ಬಲವರ್ಧನೆ, ಕೃಷಿ ಉತ್ಪನ್ನಗಳ ಸಂಸ್ಕರಣೆ ಮತ್ತು ಕೃಷಿ ಯಾಂತ್ರೀಕರಣ ಅಭಿಯಾನ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತದೆ

2 ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ: (2401-00-102-0-08)

ಹನ್ನೊಂದನೆಯ ಪಂಚವಾರ್ಷಿಕ ಯೋಜನೆಯಲ್ಲಿ ಪ್ರಾರಂಭವಾದ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ, ಹನ್ನೆರಡನೇ ಪಂಚವಾರ್ಷಿಕ ಯೋಜನೆಯ ಅವಧಿಯಲ್ಲೂ ಮುಂದುವರೆದಿದೆ ಹನ್ನೆರಡನೇ ಪಂಚವಾರ್ಷಿಕ ಯೋಜನೆಯಲ್ಲಿ ರಾಜ್ಯದಲ್ಲಿ ಬತ್ತ ಮತ್ತು ದ್ವಿದಳ ಧಾನ್ಯಗಳ ಉತ್ಪಾದನೆಯನ್ನು ಹೆಚ್ಚಿಸುವುದರ ಜೊತೆಗೆ ಒರಟು ಧಾನ್ಯಗಳು ಮತ್ತು ವಾಣಿಜ್ಯ ಬೆಳೆಗಳ ಉತ್ಪಾದನೆಯನ್ನು ಸಹ ಹೆಚ್ಚಿಸಲು ಉದ್ದೇಶಿಸಿದ್ದು, ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನದಡಿ ಎನ್ ಎಫ್.ಎಸ್.ಎಂ-ಅಕ್ಕಿ ಮತ್ತು ಎನ್ ಎಫ್.ಎಸ್.ಎಂ-ದ್ವಿದಳಧಾನ್ಯ, ಎನ್.ಎಫ್.ಎಸ್.ಎಮ್-ಒರಟುಧಾನ್ಯಗಳು, ಎನ್ ಎಫ್.ಎಸ್.ಎಮ್-ವಾಣಿಜ್ಯ ಬೆಳೆಗಳು(ಹತ್ತಿ ಮತ್ತು ಕಬ್ಬು) ಯೋಜನೆಗಳನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ

ಎಸ್.ಎಫ್ ಎಸ್.ಎಂ-ಅಕ್ಕಿ: ಈ ಯೋಜನೆಯಡಿ ಬತ್ತ ಬೆಳೆಯುವ ತಾಂತ್ರಿಕತೆಗಳಾದ ಶ್ರೀ ಪದ್ಧತಿ/ ನೇರ ಬತ್ತದ ನಾಟಿ/ ಸಾಲು ಬತ್ತದ ನಾಟಿ ಕುರಿತು 100ಹೆ ಪ್ರದೇಶದ ಗುಚ್ಛ ಪ್ರಾತ್ಯಕ್ಷತೆಗಳು, ಬೆಳೆ ಪದ್ಧತಿ ಪ್ರಾತ್ಯಕ್ಷತೆಗಳು, ಸುಧಾರಿತ ತಳಿ / ಹೈಬ್ರಿಡ್ ಬತ್ತದ ಬೀಜ ವಿತರಣೆ, ಸಮಗ್ರ ಪೋಷಕಾಂಶ ಮತ್ತು ಸಮಗ್ರ ಪೀಡೆ ನಿರ್ವಹಣೆಗೆ ಪರಿಕರಗಳ ವಿತರಣೆ, ವಿವಿಧ ಯಂತ್ರೋಪಕರಣಗಳು ಹಾಗೂ ಸಮರ್ಥ ನೀರು ಬಳಕೆಗೆ ಪಂಪ್ ಸೆಟ್, ಹನಿ ನೀರಾವರಿ ಮತ್ತು ಪೈಪುಗಳ ವಿತರಣೆ ಹಾಗೂ ತರಬೇತಿ ಕಾರ್ಯಕ್ರಮಗಳಿಗೆ ಅವಕಾಶ ಕಲ್ಪಿಸಲಾಗಿದೆ.

ಎಸ್.ಎಫ್.ಎಸ್.ಎಂ-ದ್ವಿದಳಧಾನ್ಯ: ಈ ಯೋಜನೆಯಡಿ ವಿವಿಧ ತಾಂತ್ರಿಕತೆಗಳ ಕುರಿತು 100ಹೆ ಪ್ರದೇಶದ ಗುಚ್ಛ ಪ್ರಾತ್ಯಕ್ಷತೆಗಳು, ಬೆಳೆ ಪದ್ಧತಿ ಪ್ರಾತ್ಯಕ್ಷತೆಗಳು, ಸುಧಾರಿತ ತಳಿಗಳ ಬೀಜ ವಿತರಣೆ, ಸಮಗ್ರ ಪೋಷಕಾಂಶ ಮತ್ತು ಸಮಗ್ರ

ಪೈಪ್ ನಿರ್ಮಾಣಕ್ಕೆ ಪರಿಕರಗಳ ವಿತರಣೆ, ವಿವಿಧ ಯಂತ್ರೋಪಕರಣಗಳು ಹಾಗೂ ಸಮರ್ಥ ನೀರು ಬಳಕೆಗೆ ಪೂರಕ ಸಣ್ಣ, ಹನಿ ನೀರಾವರಿ ಮತ್ತು ಪೈಪುಗಳ ವಿತರಣೆ ಹಾಗೂ ತರಬೇತಿ ಕಾರ್ಯಕ್ರಮಗಳಿಗೆ ಅವಕಾಶ ಕಲ್ಪಿಸಲಾಗಿದೆ

ಎಸ್ ಎಫ್ ಎಸ್ ಎಂ-ಒರಟುಧಾನ್ಯ, ಮುಸುಕಿನ ಜೋಳ, ರಾಗಿ, ಜೋಳ, ಸಜ್ಜೆ ಮತ್ತು ಇತರೆ ಕೃಷಿ ವಾಣಿಜ್ಯ ಪ್ರಾತ್ಯಕ್ಷಿಕೆಗಳನ್ನು ಕೈಗೊಳ್ಳಲಾಗುತ್ತಿದೆ ಪ್ರಮಾಣಿತ ಬಿತ್ತನೆ ಬೀಜ ವಿತರಣೆಗೆ ಅವಕಾಶ ಕಲ್ಪಿಸಲಾಗಿದೆ

ಎಸ್ ಎಫ್ ಎಸ್ ಎಂ-ವಾಣಿಜ್ಯಬೆಳೆಗಳು ಈ ಯೋಜನೆಯಡಿ ವಾಣಿಜ್ಯ ಬೆಳೆಗಳಾದ ಕಬ್ಬು ಮತ್ತು ಹತ್ತಿಯಲ್ಲಿ ಉತ್ಪಾದನೆ ಹಾಗೂ ಉತ್ಪಾದಕತೆಯನ್ನು ಹೆಚ್ಚಿಸಲು ಆಯ್ದ ಜಿಲ್ಲೆಗಳಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು

3. ರಾಷ್ಟ್ರೀಯ ಸುಸ್ಥಿರ ಕೃಷಿ ಅಭಿಯಾನ

ಕ್ಷೇತ್ರ ನೀರು ನಿರ್ವಹಣೆ

ಕೃಷಿ ಇಲಾಖೆಯಲ್ಲಿ ರಾಜ್ಯಾದ್ಯಂತ ಕೃಷಿ ಚಟುವಟಿಕೆಗಳಿಗೆ ಸಹಾಯವಾಗುವಂತೆ ಸೂಕ್ಷ್ಮ ನೀರಾವರಿ ಘಟಕಗಳನ್ನು ಕಡಿಮೆ ವೆಚ್ಚದಲ್ಲಿ ಎಲ್ಲಾ ವರ್ಗದ ರೈತರಿಗೆ ಅದರಲ್ಲೂ ಸಣ್ಣ ಮತ್ತು ಅತಿಸಣ್ಣ ರೈತರು ಕಡಿಮೆ ವೆಚ್ಚದಲ್ಲಿ ಪಡೆಯುವಂತೆ ಮಾಡಲು ಲಭ್ಯವಿರುವ ನೀರನ್ನು ಸಮರ್ಪಕವಾಗಿ ಬಳಸಿಕೊಳ್ಳಲು ಮತ್ತು ಹೆಚ್ಚಿನ ಉತ್ಪಾದನೆ ಹಾಗೂ ಉತ್ಪಾದಕತೆಯನ್ನು ಗಳಿಸಲು ರಾಷ್ಟ್ರೀಯ ಸೂಕ್ಷ್ಮ ನೀರಾವರಿ ಅಭಿಯಾನ ಯೋಜನೆಯನ್ನು ಕೇಂದ್ರವಲಯದ ಅನುದಾನದೊಂದಿಗೆ ರಾಜ್ಯವಲಯದ ಅನುದಾನವನ್ನು ಸಮನ್ವಯಗೊಳಿಸಿ ಅನುಷ್ಠಾನಗೊಳಿಸಲಾಗುತ್ತಿದೆ.